# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1049
ಸದಸ್ಯರ ಹೆಸರು : ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 22-09-2022
ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯ ಸರ್ಕಾರಿ ನೌಕರರಿಗೆ ಕೇಂದ್ರದ ಮಾದರಿಯಲ್ಲಿ 7ನೇ ವೇತನ ಆಯೋಗವನ್ನು ರಚಿಸಿ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರ ಸಮಿತಿಯನ್ನು ರಚಿಸಿದೆಯೇ; ರಚಿಸಿದ್ದಲ್ಲಿ, ಯಾವ ಯಾವ ಸಮಿತಿಗಳು ವರದಿಯನ್ನು ನೀಡಿದೆ; ವರದಿ ನೀಡಲು ಬಾಕಿಯಿರುವ ಸಮಿತಿಗಳಿಗೆ ಕಾಲಮಿತಿ ನಿಗಧಿಪಡಿಸಲಾಗಿದೆಯೇ? | ರಾಜ್ಯ ಸರ್ಕಾರವು ಸಾಂಪ್ರದಾಯಿಕವಾಗಿ ಕೇಂದ್ರ ಸರ್ಕಾರ / ಇತರ ರಾಜ್ಯ ಸರ್ಕಾರಗಳು ರಚಿಸುವ ವೇತನ ಆಯೋಗಗಳ ಶಿಫಾರಸ್ಸು ಹಾಗೂ ವೇತನ ಪರಿಷ್ಕರಣೆಯ ಅವಧಿಯನ್ನು ಅನುಸರಿಸದೇ ತನ್ನದೇ ಆದ ವೇತನ ಆಯೋಗ /ವೇತನ ಸಮಿತಿಗಳಂತಹ ತಜ್ಞ ಸಮಿತಿಗಳ ಶಿಫಾರಸ್ಸಿನ ಮೇರೆಗೆ ತನ್ನದೇ ಆದ ವಿಶಿಷ್ಠ ವೇತನ ರಚನೆಯನ್ನು ಅಳವಡಿಸಿಕೊಂಡಿದ್ದು, ಅದನ್ನು ಕಾಲದಿಂದ ಕಾಲಕ್ಕೆ ಪರಿಷ್ಕರಿಸಿಕೊಂಡು ಬಂದಿರುತ್ತದೆ. ಇದು ರಾಜ್ಯ ಸರ್ಕಾರದ ನೀತಿಯಾಗಿರುತ್ತದೆ. ಆದುದರಿಂದ, ಕೇಂದ್ರ ಸರ್ಕಾರದ ನಿಯಮಗಳು ಮತ್ತು ಕೇಂದ್ರ ವೇತನ ಆಯೋಗ ಮತ್ತು ಇತರೆ ರಾಜ್ಯಗಳ ವೇತನ ಆಯೋಗಗಳ ಶಿಫಾರಸ್ಸುಗಳನ್ನು ರಾಜ್ಯ ಸರ್ಕಾರದ ನೌಕರರಿಗೆ ಹೋಲಿಸಿ ಅನ್ವಯಿಸಲು ಬರುವುದಿಲ್ಲ. |



Generated from eOffice by G JAGADEESHA, CMO-JS(GJ), JOINT SECREATRY, CMO on 16/09/2022 03:53 PM

| | | |
|---|---|---|
| | | ಮುಂದುವರೆದು, ವೇತನ ಪರಿಷ್ಕರಣೆಯ ವಿಷಯವು ಸರ್ಕಾರದ ನೀತಿ ನಿರ್ಣಯಕ್ಕೆ ಸಂಬಂಧಿಸಿದ್ದಾಗಿದ್ದು, ಈ ಬಗ್ಗೆ ಸರ್ಕಾರದ ಆರ್ಥಿಕ ಸ್ಥಿತಿಗತಿಗಳನ್ನು ಗಮನದಲ್ಲಿರಿಸಿ ಸಂದರ್ಭಾನುಸಾರ ಕ್ರಮ ಕೈಗೊಳ್ಳಲಾಗುವುದು. |

ಸಂ: ಆಇ 37 ಎಸ್‌ಆರ್‌ಪಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ